p

# ಕೃಷಿ ವಿಶ್ವ ವಿದ್ಯಾನಿಲಯ
# ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
# ಜಿ.ಕೆ.ವಿ.ಕೆ., ಬೆಂಗಳೂರು–560065
## * ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

**ದಿನಾಂಕ:** 18.09.2020

## ರಾಮನಗರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

### (ದಿನಾಂಕ **19-09-2020** ರಿಂದ **23-09-2020** ವರೆಗೆ)

| ನಿಯತಾಂಕಗಳು | 19.09.2020 | 20.09.2020 | 21.09.2020 | 22.09.2020 | 23.09.2020 |
|---|---|---|---|---|---|
| ಮಳೆ (ಮಿ ಮಿ) | 10 | 15 | 10 | 4 | 2 |
| ಗರಿಷ್ಠ ಉಷ್ಣಾಂಶ(ಡಿ.ಸೆ.) | 28 | 28 | 29 | 29 | 30 |
| ಕನಿಷ್ಠ ಉಷ್ಣಾಂಶ(ಡಿ.ಸೆ.) | 21 | 21 | 21 | 21 | 20 |
| ಮೋಡ ( ಪ್ರಮಾಣ) | 7 | 7 | 7 | 7 | 7 |
| ಅರ್ದ್ರತೆ 7.20 ಬೆ (ಶೇ) | 83 | 83 | 82 | 84 | 84 |
| ಅರ್ದ್ರತೆ 2.20 ಮ (ಶೇ) | 53 | 53 | 53 | 54 | 54 |
| ಗಾಳಿಯ ವೇಗ(ಕಿ.ಮಿ/ಗಂಟೆಗೆ) | 5 | 5 | 6 | 7 | 6 |
| ಗಾಳಿಯ ದಿಕ್ಕು (ಡಿಗ್ರಿ) | 248 | 257 | 249 | 248 | 248 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆ0ಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0-29.0°C** ಮತ್ತು ಕನಿಷ್ಠ **20.0-21.0°C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 82–84 % ಇದ್ದು ಮಧ್ಯಾಹ್ನ 53–54 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 5–7 ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

### ವಾರದ ಮಳೆಯ ಮುನ್ಸೂಚನೆ ದಿನಾಂಕ 16–09–2020 ರಿಂದ 22–09–2020

| ರಾಜ್ಯ | ಪ್ರದೇಶ | ವಾಸ್ತವಿಕ ಮಳೆ (ಮಿ.ಮೀ) | ವಾಡಿಕೆ ಮಳೆ (ಮಿ.ಮೀ) | ಬದಲಾವಣೆ (ಪ್ರತಿಶತ %) |
|---|---|---|---|---|
| ಕರ್ನಾಟಕ | ದಕ್ಷಿಣ ಒಳನಾಡು | 6.8 | 5.4 | 26 |

### "ಉತ್ತರ ಮಳೆ ಹೂದ್ರೆ, ಬಿತ್ತಿದ್ದೆಲ್ಲಾ ಬಂಗಾರ!"

- ಉತ್ತರ ಮಳೆಯು ಕಾಲವು ಸೆಪ್ಟೆಂಬರ್ ತಿಂಗಳ 13 ರಿಂದ ಸೆಪ್ಟೆಂಬರ್ ತಿಂಗಳ 26 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 91.9 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಮುಂದಿನ 7 ದಿನಗಳಲ್ಲಿ ಉತ್ತಮ ಮಳೆಯ ಅವಕಾಶವಿರುವುದರಿಂದ ರಾಗಿ ಬಿತ್ತನೆಯಾಗಿರುವ ಕಡೆಗಳಲ್ಲಿ ಎಲ್ಲೆಲ್ಲಿ ಖಾಲಿ ಇರುವ ಜಾಗಗಳಲ್ಲಿ ರಾಗಿ ಗಿಡಗಳನ್ನು ನಾಟಿ ಮಾಡಿ ಇದರಿಂದ ಗಿಡಗಳ ಸಂಖ್ಯೆಯನ್ನು ಕಾಪಾಡಿಕೊಳ್ಳಬಹುದು ಹಾಗು ತೆಂಡೆ ಹೊಡೆಯಲು ಸಹಾಯವಾಗುತ್ತದೆ ಮತ್ತು ಉತ್ತಮ ಇಳುವರಿಯನ್ನು ಪಡೆಯಬಹುದು.<br>➢ ಹೆಚ್ಚು ಮಳೆಯ ಅವಕಾಶವಿರುವುದರಿಂದ ಬೆಳೆಗಳಲ್ಲಿ ಕಳೆಗಳ ಸಮಸ್ಯೆ ಹೆಚ್ಚಾಗಿರುತ್ತದೆ ಇದರ ನಿರ್ಮೂಲನೆಗೆ ಕುಂಟೆ ಹಾಯಿಸುವ ಮುಖಾಂತರ ಅಥವಾ ಕಳೆನಾಶಕವನ್ನು ಸಿಂಪಡಿಸಬೇಕು.<br>➢ ತೊಗರಿ ಬೆಳೆಯಲ್ಲಿ ಮೊಗ್ಗು ಮತ್ತು ಹೂವಿನ ಹಂತದಲ್ಲಿ ಕಾಯಿಕೊರಕ ಹುಳುವಿನ ಜೈವಿಕ ಹತೋಟಿ ಮಾಡಲು ಎಕರೆಗೆ 200 ಎಲ್.ಇ ನಂಜು ರೋಗಾಣು (ಹೆಚ್.ಎ.ಎನ್.ಪಿ.ವಿ) ಗಳನ್ನು 400 ಲೀಟರ್ ನೀರಿನಲ್ಲಿ ಸೇರಿಸಿ ಶೇ.0.1 ಟೀಪಾಲ್ ಮತ್ತು ಶೇ. 0.5 ರ ಬೆಲ್ಲದ ಪಾಕವನ್ನು ಬೆರೆಸಿ ಸಾಯಂಕಾಲದ ಸಮಯದಲ್ಲಿ ಸಿಂಪಡಿಸಬೇಕು. ಇದರಿಂದ ಮರಿ ಹುಳುಗಳಿಗೆ ನಂಜಾಣು ರೋಗ ತಗಲಿ ತಲೆ ಕೆಳಗಾಗಿ ನೇತಾಡುತ್ತಾ ಸಾಯುತ್ತವೆ ಮತ್ತು ಹೆಲಿಕೊವರ್ಪ ಮೋಹಕ ಬಲೆಗಳನ್ನು ಹೆಕ್ಟೇರ್ ಗೆ 10 ನ್ನು ಬಳಸಬೇಕು ಹಾಗು 20 ದಿನಗಳಿಗೊಮ್ಮೆ ಮೋಹಕ ವಸ್ತು (ಲ್ಯೂರ್) |

| | |
|---|---|
| | ಬದಲಿಸಬೇಕು.<br>➢ ತೊಗರಿ ಬೆಳೆಯಲ್ಲಿ ಸೊರಗು ರೋಗದ ಹತೋಟಿಗೆ ಕಾರ್ಬೆನ್‌ಡೈಜಿಮ್ 50 ಡಬ್ಲ್ಯೂ. ಪಿ. 2 ಗ್ರಾಂ/ಲೀ ನೀರಿನಲ್ಲಿ ಬೆರೆಸಿ ಬುಡಕ್ಕೆ ಸುರಿಯಿರಿ.<br>➢ ಸೊರಗು ರೋಗದ ಗಿಡಗಳನ್ನು ಕಿತ್ತು ಒಂದೆಡೆ ಹಾಕಿ ಸುಡಬೇಕು.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>**ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>➢ ರಾಗಿ: ಕೆ.ಎಮ್,ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>➢ ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಆಗಸ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು.<br>➢ ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎಸ್.ಎ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ ಮತ್ತು ಹೇಮ –ಸಂಕರಣ ತಳಿ ಬಿತ್ತಲು ಸೂಚಿಸಲಾಗಿದೆ.<br>ಮೇಲಿನ ಮುಸುಕಿನ ಜೋಳ ತಳಿಗಳು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ ಮತ್ತು ಕಾಂಡ ಕೊರೆಯುವ ಕೀಟ ನಿರೋಧಕ ಶಕ್ತಿ ಹೊಂದಿವೆ. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | ➢ ಜಿಲ್ಲೆಯಲ್ಲಿ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**